ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕೋವಿಡ್-19ರ ಬಗ್ಗೆ ಸಮರ್ಪಕ ವೈದ್ಯಕೀಯ ಸೌಲಭ್ಯ ನೀಡುವ ಬಗ್ಗೆ

ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

101 (143) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೋವಿಡ್-19ರ ರೋಗಿಗಳಿಗೆ ಸಮರ್ಪಕ ವೈದ್ಯಕೀಯ ಸೇವೆಯನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರಗಳನ್ನು ನೀಡುವುದು)

(ಆ) ರಾಜ್ಯದ ಎಲ್ಲಾ ಜಿಲ್ಲೆ ಮತ್ತು ತಾಲ್ಲೂಕು ಕೋವಿಡ್ ಕೇರ್ ಸೆಂಟರ್‌ಗಳಿಗೆ ಅರೆ ವೈದ್ಯಕೀಯ ಸಿಬ್ಬಂದಿಗಳಾದ ಶುಶ್ರೂಷಕರು, ಲ್ಯಾಬ್ ಟೆಕ್ನಿಷಿಯನ್ಸ್, ಫಾರ್ಮಾಸಿಸ್ಟ್, ಗ್ರೂಪ್-ಡಿ ಹುದ್ದೆಗಳನ್ನು ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲಾಗಿದೆಯೇ; ಭರ್ತಿ ಮಾಡಿದ್ದಲ್ಲಿ, ಜಿಲ್ಲಾ ಮತ್ತು ತಾಲ್ಲೂಕುಗಳ ಕೋವಿಡ್ ಕೇರ್ ಸೆಂಟರ್ವಾರು ವಿವರಗಳನ್ನು ನೀಡುವುದು;

(ಇ) ತಾಲ್ಲೂಕುವಾರು ಕೋವಿಡ್-19 ರೆಫರೆಲ್ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಿರುವ ಪಾಸಿಟಿವ್ ಸೋಂಕಿತರ ವಿವರ ಮತ್ತು ಸೋಂಕಿತರಿಗೆ ಸರ್ಕಾರ ಭರಿಸುತ್ತಿರುವ ವೆಚ್ಚದ ವಿವರಗಳನ್ನು ನೀಡುವುದು;

(ಈ) ಖಾಸಗಿ ಆಸ್ಪತ್ರೆಗಳು ಪ್ರಭಾವಿ ವ್ಯಕ್ತಿಗಳಿಗೆ ಮಾತ್ರ ಚಿಕಿತ್ಸೆ ನೀಡುತ್ತಿದ್ದು, ಹಲವು ಪ್ರಕರಣಗಳಲ್ಲಿ ಚಿಕಿತ್ಸೆ ನೀಡದೆ ಸಾವು ಸಂಭವಿಸಲು ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಪ್ರಮಾಣಿಕ ಕಾರ್ಯಾಚರಣೆ ವಿಧಾನಗಳು, ಸಕ್ಷಮ ಪ್ರಾಧಿಕಾರಗಳ ಮಾರ್ಗಸೂಚಿಗಳು, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಐಪಿಸಿ, ಸಾಂಕ್ರಾಮಿಕ ರೋಗ ಕಾಯ್ದೆಗಳನ್ವಯ ಇಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ ಜಿಲ್ಲಾವಾರು ವಿವರಗಳನ್ನು ನೀಡುವುದು;

(ಉ) ಕೋವಿಡ್ ಸೋಂಕಿತರು ಮರಣ ಸಂಭವಿಸಿದಾಗ, ಮೃತರ ಅಂತ್ಯಕ್ರಿಯೆಯ ವೆಚ್ಚವನ್ನು ಯಾವ ಸಕ್ಷಮ ಪ್ರಾಧಿಕಾರ ಭರಿಸಬೇಕು; ಪ್ರತಿ ಶವಸಂಸ್ಕಾರಕ್ಕೆ ಸರ್ಕಾರ ನಿಗದಿಪಡಿಸಿರುವ ವೆಚ್ಚದ ವಿವರ ನೀಡುವುದು;

(ಉ) ರಾಜ್ಯಾದ್ಯಂತ ಸೋಂಕಿತರ ಚಿಕಿತ್ಸೆಗೆಂದು ಸರ್ಕಾರ ಆಗಸ್ಟ್ ಅಂತ್ಯದವರೆಗೆ ಜ್ವರದ ಕ್ಲಿನಿಕ್‌ಗಳು, ಕ್ವಾರಂಟೈನ್ ಕೇಂದ್ರಗಳು, ಐಸೋಲೇಷನ್ ಕೇಂದ್ರಗಳು, ಕೋವಿಡ್ ನಿಗದಿತ ಆಸ್ಪತ್ರೆಗಳು ಸೇರಿ ಒಟ್ಟು ವೆಚ್ಚದ ಜಿಲ್ಲಾವಾರು ವಿವರಗಳನ್ನು ನೀಡುವುದು;

(ಋ) ಸಂಪೂರ್ಣ ಅನ್‌ಲಾಕ್‌ನಿಂದಾಗಿ ಮುಂಬರುವ ದಿನಗಳಲ್ಲಿ ಸೋಂಕು ಹರಡುವಿಕೆಯನ್ನು ತಡೆಗಟ್ಟಲು ಸರ್ಕಾರ ಮುಂಜಾಗೃತಾ ಕ್ರಮವಾಗಿ ಕೈಗೊಳ್ಳಲು ಉದ್ದೇಶಿಸಿರುವ ಕ್ರಮಗಳು ಯಾವುವು?